ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2017-18 ದಿನಾಂಕ: 11.10.2017

**ಸುತ್ತೋಲೆ**

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/16-17 ದಿನಾಂಕ:04/04/2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ ಅರ್ಹ ವಿದ್ಯಾರ್ಥಿಗಳ ಮಾಹಿತಿಗಳನ್ನು ಪಡೆಯುವಂತೆ ಉಲ್ಲೇಖ(2)ರ ಈ ಕಛೇರಿಯ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಪ್ರಸ್ತುತ ಟೆಂಡರ್ ಪ್ರಕ್ರಿಯೆಗಳು ಪೂರ್ಣಗೊಂಡಿದ್ದು, ಲ್ಯಾಪ್‌ಟಾಪ್‌ಗಳ ಸರಬರಾಜಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಕಾಲೇಜುಗಳಿಂದ ನೀಡಲಾಗಿರುವ ಮಾಹಿತಿಯನುಸಾರವಾಗಿ, 2016-17ನೇ ಸಾಲಿನಲ್ಲಿ ಪದವಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ಪ್ರಸ್ತುತ ಎರಡನೇ ವರ್ಷದ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ **ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ**. ಈ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು, ತಮ್ಮ ಕಾಲೇಜಿನ ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಕೂಡಲೇ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವ ಮೂಲಕ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸೂಚಿಸಲಾಗಿದೆ. ಮುಂದುವರೆದಂತೆ ಈ ಸಂಬಂಧದಲ್ಲಿ ಈ ಕೆಳಗಿನಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ:

1. ಅರ್ಹ ವಿದ್ಯಾರ್ಥಿಗಳ ಪಟ್ಟಿಯಲ್ಲಿ ಹೆಸರುಗಳು ಬಿಟ್ಟು ಹೋಗಿರುವ ಬಗ್ಗೆ ಆಕ್ಷೇಪಣೆ ಸ್ವೀಕೃತವಾದಲ್ಲಿ ಕೂಡಲೇ ವಿದ್ಯಾರ್ಥಿಗಳಿಂದ ಲಿಖಿತವಾಗಿ ಮಾಹಿತಿ ಪಡೆದು ಕಾಲೇಜಿನಲ್ಲಿ ಲಭ್ಯವಿರುವ ಪ್ರವೇಶಾತಿ ದಾಖಲಾತಿಗಳೊಂದಿಗೆ ಪರಿಶೀಲಿಸಿ, ಲ್ಯಾಪ್‌ಟಾಪ್ ಪಡೆಯಲು ಅರ್ಹರೇ ಎಂಬ ಬಗ್ಗೆ ನಿರ್ಣಯಿಸುವುದು. ವಿದ್ಯಾರ್ಥಿಯು 2016-17ನೇ ಸಾಲಿನಲ್ಲಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪದವಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ಪ್ರಸ್ತುತ ಎರಡನೇ ವರ್ಷದ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕೆಂದೂ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಕಡಿಮೆ ಇರಬೇಕೆಂಬ ಅಂಶವನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು. ಪ್ರಥಮ ಪದವಿ ತರಗತಿಯನ್ನು ಇನ್ನೊಂದು ಸರ್ಕಾರಿ ಕಾಲೇಜುಗಳಲ್ಲಿ ಪೂರೈಸಿದ್ದು, ಪಟ್ಟಿಯಲ್ಲಿ ಆ ಕಾಲೇಜಿನಲ್ಲಿ ಹೆಸರು ಇದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ತಮ್ಮ ಕಾಲೇಜಿನಲ್ಲಿ ಲ್ಯಾಪ್‌ಟಾಪ್ ಸರಬರಾಜು ಮಾಡಲಾಗುವುದರಿಂದ ಅಂತಹ ವಿದ್ಯಾರ್ಥಿಗಳ ವಿವರಗಳನ್ನು ನಮೂದಿಸಿ ಪಟ್ಟಿಯನ್ನು ಪರಿಷ್ಕೃತಗೊಳಿಸುವುದು.
2. ಪಟ್ಟಿಯಲ್ಲಿರುವ ವಿದ್ಯಾರ್ಥಿಗಳು ದ್ವಿತೀಯ ವರ್ಷದ ಪದವಿ ತರಗತಿಗಳಿಗೆ ಪ್ರವೇಶಾತಿ ಪಡೆದಿಲ್ಲದ ಪಕ್ಷದಲ್ಲಿ ಅಂತಹ ವಿದ್ಯಾರ್ಥಿಗಳ ವಿವರಗಳನ್ನು ತಮ್ಮ ಕಾಲೇಜಿನಲ್ಲಿ ಲಭ್ಯವಿರುವ ಪ್ರವೇಶಾತಿ ದಾಖಲಾತಿಗಳ ಪ್ರಕಾರ ಪರಿಶೀಲಿಸಿ ಪ್ರವೇಶಾತಿ ಪಡೆಯದಿರುವುದನ್ನು ಖಚಿತಪಡಿಸಿಕೊಂಡು ಪಟ್ಟಿಯಲ್ಲಿ ಸದರಿ ವಿದ್ಯಾರ್ಥಿಗಳ ವಿವರಗಳಾನ್ನು ತೆಗೆದುಹಾಕಿ ಪರಿಷ್ಕೃತಗೊಳಿಸುವುದು.
3. ಕಾಲೇಜುಗಳಿಂದ ಕೇಂದ್ರ ಕಛೇರಿಗೆ ಮಾಹಿತಿಯನ್ನು ನೀಡುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಒಳಜಾತಿಯನ್ನು ಮಾತ್ರ ನಮೂದಿಸಿದ್ದಲ್ಲಿ **ಪರಿಶಿಷ್ಟ ಜಾತಿ/ಪಂಗಡಕ್ಕೆ** ಸೇರಿರುತ್ತಾರೆಯೇ ಎಂಬ ಬಗ್ಗೆ ಮಾತ್ರ ಮಾಹಿತಿಯನ್ನು ಜಾತಿ ಪ್ರಮಾಣಪತ್ರದನುಸಾರವಾಗಿ ಪಡೆಯತಕ್ಕದ್ದು. **ಜಾತಿ/ಒಳಪಂಗಡಗಳನ್ನು ನಮೂದಿಸುವಂತಿಲ್ಲ.**

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in

4. ಡೌನ್‌ಲೋಡ್ ಮಾಡಿಕೊಂಡಿರುವ ಪಟ್ಟಿಯನ್ನು ದಿ.11/10/2017 ರಿಂದ ದಿ:14/10/2017ರವರೆಗೆ ನೋಟಿಸ್ ಬೋರ್ಡನಲ್ಲಿ ಪ್ರದರ್ಶಿಸುವುದು ಹಾಗೂ ಈ ಬಗ್ಗೆ ಪ್ರತಿ ತರಗತಿಗಳಲ್ಲಿ ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ನೀಡುವುದು. ದಿನಾಂಕ:15/10/2017 ರಂದು ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಪರಿಷ್ಕರಿಸಿ ಸಿದ್ಧಪಡಿಸಿಕೊಳ್ಳುವುದು.
5. ದಿನಾಂಕ:17/10/2017ರ ಒಳಗಾಗಿ ಇಎಂಐಎಸ್ ತಂತ್ರಾಂಶದಲ್ಲಿ ನೀಡಲಾಗುವ 'ಲಿಂಕ್'ನಲ್ಲಿ ಸಿದ್ಧಪಡಿಸಿಟ್ಟುಕೊಂಡಿರುವ ಪರಿಷ್ಕೃತ ವಿದ್ಯಾರ್ಥಿಗಳ ಪಟ್ಟಿಯನುಸಾರವಾಗಿ ಮಾಹಿತಿಗಳನ್ನು 'ಅಪ್‌ಡೇಟ್' ಮಾಡುವಂತೆ ಸೂಚಿಸಲಾಗಿದೆ. ಸದರಿ 'ಲಿಂಕ್'ನಲ್ಲಿ ಅರ್ಹ ವಿದ್ಯಾರ್ಥಿಗಳನ್ನು ಸೇರ್ಪಡೆ ಮಾಡಲು, ಅನರ್ಹ ಹಾಗೂ ದ್ವಿತೀಯ ವರ್ಷಕ್ಕೆ ಪ್ರವೇಶಾತಿ ಪಡೆದಿಲ್ಲದ ವಿದ್ಯಾರ್ಥಿಗಳ ವಿವರಗಳನ್ನು ತೆಗೆದುಹಾಕಲು ಅವಕಾಶ ಕಲ್ಪಿಸಲಾಗುವುದು. ಮಾಹಿತಿಗಳನ್ನು ಸಂಪೂರ್ಣವಾಗಿ 'ಅಪ್‌ಡೇಟ್' ಮಾಡುವುದರೊಂದಿಗೆ ಅದನ್ನು ಡೌನಲೋಡ್ ಮಾಡಿಕೊಂಡು ಪ್ರತಿಗೆ ಪ್ರಾಂಶುಪಾಲರು ಸಹಿ ಮಾಡಿ, ಸದರಿ ಸಹಿ ಮಾಡಿರುವ ಪ್ರತಿಯನ್ನು ಅದೇ ಲಿಂಕ್‌ನಲ್ಲಿ 'ಅಪಲೋಡ್' ಮಾಡುವಂತೆ ತಿಳಿಸಿದೆ.

ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಯೋಜನೆಯ ಲಾಭ ತಲುಪಿಸುವ ಜವಾಬ್ದಾರಿ ಪ್ರಾಂಶುಪಾಲರದ್ದಾಗಿದ್ದು, ಸಮಯಾವಕಾಶ ಕಡಿಮೆ ಇರುವ ಕಾರಣ ನಿಗದಿತ ದಿನಾಂಕದೊಳಗಾಗಿ ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು. ಪಟ್ಟಿಯನ್ನು ಪರಿಷ್ಕರಿಸುವಾಗ ಮಾಹಿತಿಗಳು ಸರಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳುವಂತೆ ಹಾಗೂ ಸರಿಯಾದ ಮಾಹಿತಿಯನ್ನು 'ಅಪ್‌ಲೋಡ್' ಮಾಡುವಲ್ಲಿ ವಿಳಂಬವಾಗದಂತೆ ಎಚ್ಚರ ವಹಿಸುವಂತೆ ಪ್ರಾಂಶುಪಾಲರುಗಳಿಗೆ ಕಟ್ಟುನಿಟ್ಟಾಗಿ ಮತ್ತೊಮ್ಮೆ ಸೂಚನೆ ನೀಡಲಾಗಿದೆ.

ಅಡಕ: ಲ್ಯಾಪಟಾಪ್ ಪಡೆಯಲು ಅರ್ಹ ವಿದ್ಯಾರ್ಥಿಗಳ ಪಟ್ಟಿ

ಕಾಲೇಜು ಶಿಕ್ಷಣ ಆಯುಕ್ತರು

<u>**ಇವರಿಗೆ,**</u>

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ
2. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
3. ಕಛೇರಿ ಪ್ರತಿ.

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in